# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಮಹೇಶ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ, ಬ್ರಹ್ಮಾವರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರನ್ವಯ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**
1. ಮಾನ್ಯ ಉಪ ಲೋಕಾಯುಕ್ತರವರ ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್ /ಎಂವೈಎಸ್-8092/2011/ಎಆರ್‌ಇ-6, ದಿನಾಂಕ:24-12-2016.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 43 ಗ್ರಾಪಂಕಾ 2017, ದಿನಾಂಕ:17-10-2017.
3. ಮಾನ್ಯ ಉಚ್ಚ ನ್ಯಾಯಾಲಯದ ರಿಟ್‌ಅರ್ಜಿ ಸಂಖ್ಯೆ: 58001/2017, ಆದೇಶ ದಿನಾಂಕ:16-04-2018.
4. ಸರ್ಕಾರದ ನೋಟೀಸ್ ದಿನಾಂಕ: 25-10-2019, 06-07-2019 ಮತ್ತು 26-02-2020.

*******

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಶ್ರೀ ಸದಾಶಿವ ಶೆಟ್ಟಿ, ಚಾಂತಾರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ, ರವರು ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರು ನಿಯಮ ಬಾಹಿರವಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಹುಮಹಡಿ ಕಟ್ಟಡಗಳಿಗೆ ಅನುಮತಿ ನೀಡಿರುವ ಕುರಿತು ಲೋಕಾಯುಕ್ತ ಕಛೇರಿಗೆ ದೂರು ನೀಡಿದ್ದು, ಸದರಿ ದೂರಿನ ಬಗ್ಗೆ ವಿಚಾರಣೆ ನಡೆಸಿ, ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಹಾಗೂ ಶ್ರೀ ರಾಜಶೇಖರ್ ರಾವ್, ಚಾಂತಾರು ಗ್ರಾಮ ಪಂಚಾಯಿತಿ ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರುಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(1) 12(3)ರಡಿ ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಇವರು ಚಾಂತಾರು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಸಮಯದಲ್ಲಿ ನಿಯಮ ಬಾಹಿರವಾಗಿ ಬಹುಮಹಡಿ ಕಟ್ಟಡಗಳಿಗೆ ಅನುಮತಿ ನೀಡಿ, ಅಧಿಕಾರ ದುರುಪಯೋಗ ದುರ್ನಡತೆ ಎಸಗಿರುವುದರಿಂದ ಇವರನ್ನು ಕರ್ನಾಟಕ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ43(ಎ)ರನ್ವಯ ಚಾಂತಾರು ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನದಿಂದ ತಕ್ಷಣ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಶ್ರೀ ಮಹೇಶ್ ಮೊಯ್ಲಿ ರವರನ್ನು ಸದಸ್ಯತ್ವದಿಂದ ತೆಗೆದು ಹಾಕಿರುವ ಆದೇಶವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 58001/2017 ಅನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:16-04-2018ರ ಆದೇಶದಲ್ಲಿ ಪ್ರಕರಣದಲ್ಲಿ ಆಪಾದಿತ ಹಿಂದಿನ ಅಧ್ಯಕ್ಷರು, ಹಾಲಿ ಸದಸ್ಯರು, ತಮ್ಮ ವಿವರಣೆಯನ್ನು ನೀಡಲು ಸಮಂಜಸವಾದ ಅವಕಾಶವನ್ನು ನೀಡದೆ ಸದಸ್ಯ ಸ್ಥಾನದಿಂದ ತೆಗೆದು ಹಾಕಿರುವುದು ಸರಿಯಲ್ಲ ಆದ್ದರಿಂದ, ಅರ್ಜಿದಾರರಿಗೆ ಸಮರ್ಪಕ ಕಾಲಾವಕಾಶ ನೀಡಿ ಕಾನೂನು ರೀತಿ ಮತ್ತೊಮ್ಮೆ ವಿಚಾರಣೆಯನ್ನು ನಡೆಸಲು ಆದೇಶಿಸಿರುತ್ತದೆ.

...2

ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ರವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆ ನಡೆದಿದ್ದು, ವಿಚಾರಣೆ ವೇಳೆ ಹಿಂದಿನ ಅಧ್ಯಕ್ಷರಾದ ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಸದಸ್ಯರ ಪರ ವಕೀಲರು, ದಿನಾಂಕ:24.09.2007 ರಿಂದ 23.03.2010 ಅವಧಿಯ ಪ್ರಕರಣವಾಗಿದ್ದು, ಆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಸಕ್ತ ಅವಧಿಯಲ್ಲಿ ಕ್ರಮ ಜರುಗಿಸುವುದು ಸಾಧ್ಯವಿಲ್ಲವೆಂದು ತಮ್ಮ ವಿವರಣೆಯನ್ನು ಸಲ್ಲಿಸಿರುತ್ತಾರೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ರವರ ಅಧ್ಯಕ್ಷತೆಯಲ್ಲಿ ವಿಚಾರಣೆ ನಡೆದಿದ್ದು, ಪ್ರಸ್ತುತ ದಿನಾಂಕ:30.03.2020ರ ಅಧ್ಯಾದೇಶದ ಮೂಲಕ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ 43(ಎ) ಮತ್ತು48(4)ಗೆ ತಿದ್ದುಪಡಿ ತಂದಿದ್ದು, ಹಿಂದಿನ ಅವಧಿಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರು ಎಸಗಿದ ಅಧಿಕಾರ ದುರುಪಯೋಗದ ಪ್ರಕರಣದಡಿ ಕ್ರಮ ಜರುಗಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಸದರಿ ತಿದ್ದುಪಡಿ ಅಧ್ಯಾದೇಶದಂತೆ ತಪ್ಪಿತಸ್ಥ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರಾದ ಶ್ರೀ ಮಹೇಶ್ ಮೊಯ್ಲಿ ರವರು ಹಿಂದಿನ ಅವಧಿಯಲ್ಲಿ ಮಾಡಿದಂತಹ ಅಧಿಕಾರ ದುರುಪಯೋಗ ಆರೋಪ ಸಾಬೀತಾಗಿರುವುದರಿಂದ ತಿದ್ದುಪಡಿ ಅಧ್ಯಾದೇಶ 2020ರ ಕಾಯ್ದೆ ಕಲಂ 43(ಎ) 12(ಎಲ್) ರನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ 6 ವರ್ಷಗಳ ಅವಧಿಗೆ ಯಾವುದೇ ಚುನಾವಣೆಗೆ ನಿಲ್ಲದಂತೆ ನಿರ್ಬಂಧ ವಿಧಿಸಲು ಸರ್ಕಾರವು ತೀರ್ಮಾನಿಸಿ, ಅದರಂತೆ, ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ :ಗ್ರಾಅಪ 43 ಗ್ರಾಪಂಕಾ 2017, ಬೆಂಗಳೂರು, ದಿನಾಂಕ:02.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ ಬ್ರಹ್ಮಾವರ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ 43(ಎ) ತಿದ್ದುಪಡಿ ಅಧಿನಿಯಮ 2020ರ ಕಲಂ 43(ಎ)(vi) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ ಹಾಗೂ ಈ ಅಧಿನಿಯಮದ ಕಲಂ-12(ಎಲ್) ರನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ 6 ವರ್ಷಗಳ ಅವಧಿಗೆ ಯಾವುದೇ ಚುನಾವಣೆಗೆ ನಿಲ್ಲದಂತೆ ನಿರ್ಬಂಧ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ,

Chetna 2/12/21
(ಚೇತನ ಎಂ.)
ಸರ್ಕಾರದಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ಇಲಾಖೆ.
(ಜಿ.ಪಂ)

02/12/2021

**ಗೆ:**

1) ಆಯುಕ್ತರು, ಪಂಚಾಯತ್‌ರಾಜ್‌ಆಯುಕ್ತಾಲಯ, ಕೆ.ಜಿರಸ್ತೆ, ಬೆಂಗಳೂರು.-09
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3) ಮುಖ್ಯಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ದಕ್ಷಿಣ ಕನ್ನಡ ಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಬ್ರಹ್ಮಾವರ ತಾಲ್ಲೂಕು ದಕ್ಷಿಣ ಕನ್ನಡ ಜಿಲ್ಲೆ.
5) ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯಿತಿ ಬ್ರಹ್ಮಾವರ ತಾಲ್ಲೂಕು, ಉಡುಪಿ ಜಿಲ್ಲೆ.
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.